CW-08
PW-11

**<u>1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು.</u>**

ಸ್ಪೇಷಲ್ .ಕೇಸ್(ಎಸ್.ಸಿ./ಎಸ್.ಟಿ.) ಸಂಖ್ಯೆ 04/2022

ದಿ. 29-07-2026

(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು )

ಚಾಸಾ-08
ಪ್ರಾಸಾ-11

| | |
|---|---|
| ಸಾಕ್ಷಿದಾರರ ಹೆಸರು | ಸಾಬಣ್ಣ |
| ತಂದೆಯ ಹೆಸರು | ಗಂಗಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಹುಣಚೇಡ್ |

**<u>ಮುಖ್ಯ ವಿಚಾರಣೆಃ ಸಾರ್ವಜನಿಕ ಅಭಿಯೋಜಕರಿಂದಃ-</u>**

1. ನನಗೆ ಆರೋಪಿ ಗೊತ್ತು, ಚಾಸಾ-1 ಮತ್ತು 2 ರವರು ಗೊತ್ತಿರುವುದಿಲ್ಲ. ನಾನು ಬಿ.ಎ. ಪದವೀದರ. ಈಗ ನೋಡುತ್ತಿರುವ ದೂರಿನಲ್ಲಿ ನನ್ನ ಸಹಿ ಇದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ತಮ್ಮ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸುತ್ತಾರೆ. ಸದರಿ ದೂರನ್ನು ಪೊಲೀಸಿನವರು ಮತ್ತು ಜಾನೇಕಲ್ ಶರಣಬಸಪ್ಪ ಎನ್ನುವವರು ಹೇಳಿದ ಮೇರೆಗೆ ಬರೆದಿರುತ್ತೇನೆ. ಇಷ್ಟನ್ನು ಹೊರತುಪಡಿಸಿ ಈ ಪ್ರಕರಣದಲ್ಲಿ ನನಗೇನು

CW-08
PW-11

ಗೊತ್ತಿರುವುದಿಲ್ಲ. ಈ ಸಂಬಂಧ ನಾನು ಪೊಲಿಸೀನವರಿಗೆ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಸಾರ್ವಜನಿಕ ಅಭಿಯೋಜಕರಿಂದ**

2. ನಾನು ದಿಃ 08-12-2021 ರಂದು ಪೊಲೀಸರ ಮುಂದೆ ಪಿರ್ಯಾದಿ ಲಕ್ಷ್ಮೀ ಹೇಳಿದಂತೆ ದೂರನ್ನು ಬರೆದುಕೊಟ್ಟಿರುತ್ತೇನೆಂದು ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯ ಸದರಿ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ-16 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಶ್ರೀ ಜೆ.ಸಿ.ಪಿ. ವಕೀಲರಿಂದ ಆರೋಪಿ ಪರಃ**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.

(ಮಾಲ ಎನ್.ಡಿ.)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಯಚೂರು.